ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ರಾಷ್ಟ್ರಪತಿ

ಪತ್ರಿಕೆಯ ಹೆಸರು : NAME OF THE NEWS PAPER : ಉದಯವಾಣಿ ದಿನಾಂಕ : DATE : 15/08/2019

# ಕಾಶ್ಮೀರಿಗರ ಅಭಿವೃದ್ಧಿ ಖಂಡಿತ: ರಾಷ್ಟ್ರಪತಿ

15/8/19

**ನವದೆಹಲಿ:** ಜಮ್ಮು ಕಾಶ್ಮೀರದ ವಿಶೇಷ ಸ್ಥಾನಮಾನ ರದ್ದತಿಯಿಂದ ಅಲ್ಲಿನ ಜನರ ಸರ್ವಾಂಗೀಣ ಅಭಿವೃದ್ಧಿಯಾಗುತ್ತದೆ ಎಂಬ ವಿಶ್ವಾಸವನ್ನು ರಾಷ್ಟ್ರಪತಿ ರಾಮನಾಥ್ ಕೋವಿಂದ್ ವ್ಯಕ್ತಪಡಿಸಿದ್ದಾರೆ.



ಸ್ವಾತಂತ್ರ್ಯೋತ್ಸವದ ಮುನ್ನಾದಿನವಾದ ಬುಧವಾರ, ಸಂಪ್ರದಾಯದಂತೆ ರಾಷ್ಟ್ರವನ್ನುದ್ದೇಶಿಸಿ ನೀಡಿದ ಸಂದೇಶದಲ್ಲಿ ಅವರು, "ಜಮ್ಮು ಕಾಶ್ಮೀರ ರಾಜ್ಯವನ್ನು ಎರಡು ಕೇಂದ್ರಾಡಳಿತ ಪ್ರದೇಶಗಳನ್ನಾಗಿ ವಿಂಗಡಿಸಿರುವುದರಿಂದ ಅಲ್ಲಿನ ಜನತೆಗೆ ದೇಶದ ಇತರ ರಾಜ್ಯಗಳಲ್ಲಿನ ಜನತೆಯ ಮಾದರಿಯಲ್ಲೇ ತಮ್ಮ ಜೀವನವನ್ನು ಸಂತೋಷವಾಗಿ ಕಳೆಯಲು ಇರುವ ಸ್ವಾತಂತ್ರ್ಯ ಹಾಗೂ ಸೌಲಭ್ಯಗಳು ಸಿಗುತ್ತವೆ. ಇದು ಆ ಪ್ರಾಂತ್ಯಗಳ ಅಭಿವೃದ್ಧಿಗೆ ನಾಂದಿ ಹಾಡುತ್ತದೆ" ಎಂದು ತಿಳಿಸಿದ್ದಾರೆ.

ಜನರ ಒಳಿತಿಗಾಗಿಯೇ ಸಂವಿಧಾನದ ಕೆಲವಾರು ವಿಧಿಗಳಿಗೆ ತಿದ್ದುಪಡಿ ತರಲಾಗಿದೆ ಎಂದ ಕೋವಿಂದ್, ಅದಕ್ಕೆ ಉದಾಹರಣೆಯಾಗಿ ತ್ರಿವಳಿ ತಲಾಖ್ ವಿಧೇಯಕವನ್ನು ಪ್ರಸ್ತಾಪಿಸಿದರು. "ತ್ರಿವಳಿ ತಲಾಖ್ ಮೂಲಕ ನಮ್ಮ ದೇಶದ ಹೆಣ್ಣುಮಕ್ಕಳಿಗೆ ಆಗುತ್ತಿದ್ದ ಅನ್ಯಾಯವನ್ನು ಸರಿಪಡಿಸಲು ಪ್ರಯತ್ನಿಸಲಾಗಿದೆ. ಅವರಿಗೆ, ಶಿಕ್ಷಣ ಹಕ್ಕು, ಮಾಹಿತಿ ಹಕ್ಕು, ಶಿಕ್ಷಣ ಮತ್ತು ಉದ್ಯೋಗಗಳಲ್ಲಿ ಮೀಸಲಾತಿಯಂಥ ಸೌಲಭ್ಯಗಳು ಸಿಗುವಂತೆ ಕ್ರಮ ಕೈಗೊಳ್ಳಲಾಗಿದೆ" ಎಂದರು.

**'ಜೀವನ ಸ್ನೇಹಿ ಸಮಾಜ ಸೃಷ್ಟಿಯಾಗಲಿ':** ಇದೇ ವೇಳೆ, ದೇಶದ ಬ್ಯಾಂಕಿಂಗ್ ವ್ಯವಸ್ಥೆ, ಆನ್‌ಲೈನ್ ಬ್ಯಾಂಕಿಂಗ್ ವ್ಯವಸ್ಥೆಗಳಲ್ಲಿ ಗಣನೀಯ ಸುಧಾರಣೆಗಳನ್ನು ತಂದು, ಜನಸ್ನೇಹಿ ತೆರಿಗೆ ಪದ್ಧತಿಗೆ ಆದ್ಯತೆ ನೀಡಿ, ಉದ್ಯಮಗಳಿಗೆ ಹಾಗೂ ಹೂಡಿಕೆದಾರರಿಗೆ ಉತ್ತಮ ಅನುಕೂಲಗಳನ್ನು ಕಲ್ಪಿಸುವ ಮೂಲಕ ದೇಶದ ಆರ್ಥಿಕತೆಯನ್ನು ಪ್ರಗತಿ ಪಥದತ್ತ ಕೊಂಡೊಯ್ಯಬೇಕು ಎಂದು ಕೇಂದ್ರ ಸರ್ಕಾರವನ್ನು ರಾಷ್ಟ್ರಪತಿ ಆಗ್ರಹಿಸಿದರು. ಜತೆಗೆ, ಪೂರ್ವಾಗ್ರಹ ಪೀಡಿತ ಸಮಾಜದ ಬದಲಿಗೆ 'ಬದುಕಿರಿ, ಬದುಕಲು ಬಿಡಿ' ಎನ್ನುವಂಥ ಸಮಾಜವನ್ನು ನಿರ್ಮಿಸಬೇಕು ಎಂದು ಕಿವಿಮಾತು ಹೇಳಿದರು.